**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.01.2025 13.10 p.m.**

ಮುಖ್ಯಾಂಶಗಳು

1. ಕರ್ನಾಟಕದ ಬೆಂಗಳೂರಿನಲ್ಲಿಂದು ರಾಜ್ಯ ಲೋಕಸೇವಾ ಆಯೋಗದ ಅಧ್ಯಕ್ಷರುಗಳ ೨೫ನೇ ರಾಷ್ಟ್ರೀಯ ಸಮಾವೇಶ ಉದ್ಘಾಟಿಸಿದ ಉಪರಾಷ್ಟ್ರಪತಿ ಜಗದೀಪ್ ಧನಕರ್
2. ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ಮಾದಕದ್ರವ್ಯ ಕಳ್ಳಸಾಗಣೆ ಮತ್ತು ರಾಷ್ಟ್ರೀಯ ಭದ್ರತೆ ಕುರಿತ ಪ್ರಾದೇಶಿಕ ಸಮ್ಮೇಳನ
3. ಪ್ರಯಾಗ್‌ರಾಜ್ ಮಹಾಕುಂಭ: ಹೊಟೇಲ್ ಬುಕ್ಕಿಂಗ್ ವೇಳೆ ಸೈಬರ್ ಅಪರಾಧಿಗಳಿಂದ ಜಾಗರೂಕರಾಗಿರುವಂತೆ ಸಾರ್ವಜನಿಕರಿಗೆ ಪೊಲೀಸ್ ಇಲಾಖೆ ಸಲಹೆ
4. ತಮಿಳುನಾಡಿನಲ್ಲಿ ಸಿರ್ಮಾ ಎಸ್‌ಜಿಎಸ್ ಸಂಸ್ಥೆಯ ಲ್ಯಾಪ್ ಟಾಪ್ ಜೋಡಣಾ ಘಟಕಕ್ಕೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಶಂಕುಸ್ಥಾಪನೆ
5. ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್: ಇಂದು ಬೆಂಗಳೂರು ಎಫ್‌ಸಿ ಮತ್ತು ಮೊಹಮಡನ್ ಎಫ್‌ಸಿ ಮುಖಾಮುಖಿ

<><><><>

ಒಂದು ದಿನದ ಪ್ರವಾಸಕ್ಕಾಗಿ ಕರ್ನಾಟಕಕ್ಕೆ ಆಗಮಿಸಿರುವ ಉಪರಾಷ್ಟ್ರಪತಿ ಜಗದೀಪ್ ಧನಕರ್ ಬೆಂಗಳೂರಿನಲ್ಲಿಂದು ರಾಜ್ಯ ಲೋಕಸೇವಾ ಆಯೋಗದ ಅಧ್ಯಕ್ಷರುಗಳ ೨೫ನೇ ರಾಷ್ಟ್ರೀಯ ಸಮಾವೇಶವನ್ನು ಉದ್ಘಾಟಿಸಿದರು. ಸಮಾರಂಭದಲ್ಲಿ ಸುದೇಶ್ ಧನಕರ್, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಲೋಕಸೇವಾ ಆಯೋಗದ ಅಧ್ಯಕ್ಷರಾದ ಪ್ರೀತಿ ಸುದಾನ್, ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್, ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು. ಇಂದು ಬೆಳಗ್ಗೆ ಬೆಂಗಳೂರಿಗೆ ಆಗಮಿಸಿದ ಉಪರಾಷ್ಟ್ರಪತಿ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಎಂ.ಸಿ. ಸುಧಾಕರ್ ಸೇರಿದಂತೆ ಹಿರಿಯ ಅಧಿಕಾರಿಗಳು ಹೆಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು. ಭೇಟಿಯ ಭಾಗವಾಗಿ ಅವರು, ಬಿಇಎಲ್‌ನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದು, ಆನಂತರ ಬಿಎಚ್‌ಇಎಲ್‌ಗೆ ಭೇಟಿ ನೀಡಿ, ವಿಜ್ಞಾನಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ನವದೆಹಲಿಯಲ್ಲಿಂದು ನಡೆದ ಮಾದಕದ್ರವ್ಯ ಕಳ್ಳಸಾಗಣೆ ಮತ್ತು ರಾಷ್ಟ್ರೀಯ ಭದ್ರತೆ ಸಂಬಂಧಿಸಿದ ಪ್ರಾದೇಶಿಕ ಸಮ್ಮೇಳನದ ಅಧ್ಯಕ್ಷತೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ವಹಿಸಿದರು. ಮಾದಕದ್ರವ್ಯ ನಿಯಂತ್ರಣ ಸಂಸ್ಥೆ - ಎನ್‌ಸಿಬಿ ಈ ಸಮ್ಮೇಳನವನ್ನು ಆಯೋಜಿಸಿದ್ದು, ಹೆಚ್ಚುತ್ತಿರುವ ಮಾದಕದ್ರವ್ಯ ಕಳ್ಳಸಾಗಣೆ ಮತ್ತು ರಾಷ್ಟ್ರೀಯ ಭದ್ರತೆ ಮೇಲೆ ಅದರ ಪರಿಣಾಮದ ಕುರಿತು ಸಮ್ಮೇಳನ ಕೇಂದ್ರೀಕರಿಸಿದೆ. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಅಮಿತ್ ಶಾ, ಮಾದಕದ್ರವ್ಯ ವಿಲೇವಾರಿ ಪಾಕ್ಷಿಕ ಅಭಿಯಾನಕ್ಕೆ ಚಾಲನೆ ನೀಡಿದರು. ಈ ಅಭಿಯಾನ ಇಂದಿನಿಂದ ಇದೇ ೨೫ರ ವರೆಗೆ ನಡೆಯಲಿದೆ. ಈ ಸಮಯದಲ್ಲಿ ಈಗಾಗಲೇ ವಶಪಡಿಸಿಕೊಳ್ಳಲಾಗಿರುವ ೨ ಸಾವಿರದ ೪೧೧ ಕೋಟಿ ರೂಪಾಯಿ ಮೌಲ್ಯದ ಒಟ್ಟು ೪೪ ಸಾವಿರದ ೭೯೨ ಕೆ.ಜಿ. ಮಾದಕದ್ರವ್ಯಗಳನ್ನು ವಿಲೇವಾರಿ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಸಚಿವರು, ಎನ್‌ಸಿಬಿಯ ಭೂಪಾಲ್ ವಲಯ ಘಟಕದ ನೂತನ ಕಚೇರಿ ಸಂಕೀರ್ಣವನ್ನು ಉದ್ಘಾಟಿಸುವ ಜೊತೆಗೆ ಎಲ್ಲಾ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಅನುವಾಗುವ 'ಮಾನಸ್-೨' ಸಹಾಯವಾಣಿಯ ವಿಸ್ತರಣೆಗೂ ಚಾಲನೆ ನೀಡಿದರು.

<><><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯಲಿರುವ ಮಹಾಕುಂಭಕ್ಕೆ ಹೋಗುವ ಭಕ್ತರಿಗೆ ಸಾಮಾಜಿಕ ಮಾಧ್ಯಮ ವೇದಿಕೆಗಳನ್ನು ಬಳಸುವಾಗ ಜಾಗರೂಕರಾಗಿರಿ ಮತ್ತು ಸೈಬರ್ ಅಪರಾಧಿಗಳಿಗೆ ಮೋಸ ಹೋಗದಂತೆ ಎಚ್ಚರಿಕೆ ವಹಿಸುವಂತೆ ಪೊಲೀಸ್ ಇಲಾಖೆ ತಿಳಿಸಿದೆ. ಅಪರಾಧಿಗಳು ನಕಲಿ ಲಿಂಕ್‌ಗಳು ಮತ್ತು ವೆಬ್‌ಸೈಟ್‌ಗಳನ್ನು

ಬಳಸಿಕೊಂಡು ಹೋಟೆಲ್‌ಗಳು, ಧರ್ಮಶಾಲೆಗಳು ಮತ್ತು ಅತಿಥಿ ಗೃಹ ಬುಕಿಂಗ್‌ಗಳನ್ನು ಬಳಸಿಕೊಳ್ಳುತ್ತಾರೆ. ಈ ಹಿನ್ನೆಲೆ ಸಾರ್ವಜನಿಕರ ಸುರಕ್ಷತೆಗಾಗಿ, ಉತ್ತರ ಪ್ರದೇಶ ಪೊಲೀಸರು ಒದಗಿಸಿದ ಅಧಿಕೃತ ಲಿಂಕ್‌ಗಳ ಮೂಲಕ ಮಾತ್ರ ಆನ್‌ಲೈನ್ ಬುಕಿಂಗ್ ಮಾಡಬೇಕು ಎಂದು ತಿಳಿಸಲಾಗಿದೆ. ಅಧಿಕೃತ ಜಾಲತಾಣ kumbh.gov.in/en/Wheretostaylist ನಲ್ಲಿ ಮಾಹಿತಿ ಲಭ್ಯವಿದೆ. ಸೈಬರ್ ವಂಚನೆಗೊಳಗಾದ ಸಂದರ್ಭದಲ್ಲಿ, ರಾಷ್ಟ್ರೀಯ ಸಹಾಯವಾಣಿ ಸಂಖ್ಯೆ '೧೯೩೦' ಅಥವಾ ಅಧಿಕೃತ ಸೈಬರ್ ಅಪರಾಧ ಜಾಲತಾಣ www.cybercrime.gov.in ಮೂಲಕ ದೂರು ಸಲ್ಲಿಸಬಹುದಾಗಿದೆ.

<><><><>

ಅಯೋಧ್ಯೆಯ ರಾಮಮಂದಿರದಲ್ಲಿ ಬಾಲರಾಮ ಪ್ರತಿಮೆಯ ಪ್ರತಿಷ್ಠಾಪನೆಯ ಮೊದಲನೇ ವಾರ್ಷಿಕೋತ್ಸವದ ಸ್ಮರಣಾರ್ಥ ಉತ್ತರ ಪ್ರದೇಶದಲ್ಲಿ ವೈಭವೋಪೇತ ಸಂಭ್ರಮಾಚರಣೆಗೆ ಇಂದು ಚಾಲನೆ ದೊರೆತಿದೆ. ಕಳೆದ ವರ್ಷದ ಜನವರಿ ೨೨ರಂದು ಪ್ರಧಾನಿ ನರೇಂದ್ರ ಮೋದಿ, ರಾಮಜನ್ಮ ಭೂಮಿ ಮಂದಿರವನ್ನು ಉದ್ಘಾಟಿಸಿದ್ದರು. ಆದರೆ ಹಿಂದು ಪಂಚಾಂಗದ ಅನುಸಾರ ಪ್ರಾಣ ಪ್ರತಿಷ್ಠಾಪನಾ ಮಹೋತ್ಸವದ ವಾರ್ಷಿಕೋತ್ಸವ ಇಂದು ಆಚರಿಸಲಾಗುತ್ತಿದೆ. ಮೂರು ದಿನಗಳ ರಾಮಲಲ್ಲಾ ಪ್ರಾಣ ಪ್ರತಿಷ್ಠೆಯ ಮೊದಲ ವಾರ್ಷಿಕೋತ್ಸವವನ್ನು ಆಚರಿಸಲು ಅಯೋಧ್ಯೆ ಸಜ್ಜಾಗಿದ್ದು, ಮೊದಲ ದಿನ, ರಾಮಲಲ್ಲಾ ಚಿನ್ನ ಮತ್ತು ಬೆಳ್ಳಿಯಿಂದ ನೇಯ್ದ ವಿಶೇಷವಾಗಿ ತಯಾರಿಸಿದ ಪೀತಾಂಬರಿ ಉಡುಪಿನಲ್ಲಿ ಅಲಂಕರಿಸಲಾಗುವುದು. ಅಂಗದ್ ತಿಲಾದಲ್ಲಿ ೫,೦೦೦ ಜನರಿಗೆ ಆತಿಥ್ಯ ವಹಿಸುವ ಸಾಮರ್ಥ್ಯವಿರುವ ಜರ್ಮನ್ ಹ್ಯಾಂಗರ್ ಟೆಂಟ್ ಅನ್ನು ಸ್ಥಾಪಿಸಲಾಗಿದೆ, ಅಲ್ಲಿ ಸಾರ್ವಜನಿಕರು ಸಾಂಸ್ಕೃತಿಕ ಪ್ರದರ್ಶನಗಳು, ದೈನಂದಿನ ಆಚರಣೆಗಳು, ಮಂಟಪ ಮತ್ತು ಯಜ್ಞಶಾಲೆಯಲ್ಲಿ ನಡೆಯುವ ರಾಮ ಕಥಾ ಪ್ರವಚನಗಳು ಸೇರಿದಂತೆ ಇತರ ಭವ್ಯ ಕಾರ್ಯಕ್ರಮಗಳನ್ನು ವೀಕ್ಷಿಸಬಹುದು. ಪ್ರಧಾನಿ ನರೇಂದ್ರ ಮೋದಿ, ದೇಶದ ಸಮಸ್ತ ನಾಗರಿಕರಿಗೆ ಪ್ರಾಣ ಪ್ರತಿಷ್ಠಾಪನೆಯ ವಾರ್ಷಿಕೋತ್ಸವದ ಶುಭಾಶಯ ಕೋರಿದ್ದಾರೆ. ಹಲವು ದಶಕಗಳ ತ್ಯಾಗ, ತಪಸ್ಸು ಮತ್ತು ಸಂಘರ್ಷದ ಫಲವಾಗಿ ನಿರ್ಮಾಣಗೊಂಡಿರುವ ಈ ದೇಗುಲ ನಮ್ಮ ಸಂಸ್ಕೃತಿ ಹಾಗೂ ಆಧ್ಯಾತ್ಮಿಕತೆಯ ಪರಂಪರೆಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ತಿಳಿಸಿದರು.

<><><><>

ತಮಿಳುನಾಡಿನ ಪ್ರಮುಖ ವಿದ್ಯುನ್ಮಾನ ವ್ಯವಸ್ಥೆಗಳ ವಿನ್ಯಾಸ ಮತ್ತು ಉತ್ಪಾದನಾ ಕಂಪನಿ ಸಿರ್ಮಾ ಎಸ್‌ಜಿಎಸ್ ಲಿಮಿಟೆಡ್‌ನ ಲ್ಯಾಪ್‌ಟಾಪ್ ಜೋಡಣಾ ಘಟಕಕ್ಕೆ ಚೆನ್ನೈನಲ್ಲಿ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಶಂಕುಸ್ಥಾಪನೆ ನೆರವೇರಿಸಿದರು. ಈ ವೇಳೆ ಮಾತನಾಡಿದ ಅವರು, ಈ ಸೌಲಭ್ಯ ಮೇಕ್ ಇನ್ ಇಂಡಿಯಾ ಉಪಕ್ರಮದ ಒಂದು ಪ್ರಮುಖ ಮೈಲಿಗಲ್ಲಾಗಿದೆ ಎಂದರು.

<><><><>

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಭೂ ವಿಜ್ಞಾನ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಜಮ್ಮುವಿನಲ್ಲಿ ಪ್ರಾದೇಶಿಕ ಹವಾಮಾನ ಕೇಂದ್ರವನ್ನು ಸ್ಥಾಪಿಸುವುದಾಗಿ ಘೋಷಿಸಿದ್ದಾರೆ. ಹವಾಮಾನ ಸೇವೆಗಳ ಕುರಿತು ಪಾಲುದಾರರ ಕಾರ್ಯಾಗಾರದಲ್ಲಿ ಅವರು ಮಾತನಾಡುತ್ತಿದ್ದರು. ಈ ಮಹತ್ವದ ಕ್ರಮವು ಜಮ್ಮು ಮತ್ತು ಕಾಶ್ಮೀರದಲ್ಲಿ ಹವಾಮಾನ ಸೇವೆಗಳನ್ನು ಬಲಪಡಿಸಲು, ಈ ಪ್ರದೇಶದಲ್ಲಿ ವಿಪತ್ತು ಸಿದ್ಧತೆ ಮತ್ತು ಹವಾಮಾನ ಸ್ಥಿತಿಸ್ಥಾಪಕತ್ವವನ್ನು ಮತ್ತಷ್ಟು ಹೆಚ್ಚಿಸಲು ಸಜ್ಜಾಗಿದೆ ಎಂದು ಆಕಾಶವಾಣಿ ಜಮ್ಮು ವರದಿಗಾರರು ವರದಿ ಮಾಡಿದ್ದಾರೆ.

<><><><>

ಮುಂದಿನ ೫ ವರ್ಷಗಳಲ್ಲಿ ಭಾರತಕ್ಕೆ ಆಹಾರ ಮತ್ತು ಪಾನೀಯ, ಕೃಷಿ ಮತ್ತು ಕಡಲ ಉತ್ಪನ್ನಗಳ ಕೈಗಾರಿಕೆಗಳಿಂದ ನೂರು ಬಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ಒಟ್ಟು ರಫ್ತು ವಹಿವಾಟು ನಡೆಸುವ ಸಾಮರ್ಥ್ಯವಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಇಂಡಸ್ ಫುಡ್ - ೨೦೨೫ ಕಾರ್ಯಕ್ರಮದ ನೇಪಥ್ಯದಲ್ಲಿ ಮಾತನಾಡಿದ ಸಚಿವರು, ಒಟ್ಟಾರೆ ವಾರ್ಷಿಕ ೧೪ ರಿಂದ ೧೫ ಪ್ರತಿಶತದಷ್ಟು ಬೆಳವಣಿಗೆ ದರದ ಮೂಲಕ ಈ ಗುರಿ ತಲುಪಲು ಸಾಧ್ಯವಿದೆ. ಭಾರತೀಯ ಕಂಪನಿಗಳು ನಾವಿನ್ಯತೆ, ಸುಸ್ಥಿರತೆ, ನೈರ್ಮಲ್ಯ ಮತ್ತು ದಕ್ಷತೆಯ ಮೇಲೆ ಕೇಂದ್ರೀಕರಿಸಬೇಕು ಎಂದು ಕರೆ ನೀಡಿದರು.

***ಧ್ವನಿ***ಪಿಯೂಷ್ ಗೋಯಲ್

ಇದಕ್ಕೂ ಮೊದಲು, ಭಾರತ್ ಹವಾಮಾನ ವೇದಿಕೆ ಕಾರ್ಯಕ್ರಮದಲ್ಲಿ ಸಚಿವರು ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಅವರು, ದತ್ತಾಂಶ ಕೇಂದ್ರಗಳ ವಿಶ್ವದ ಅತಿದೊಡ್ಡ ತಾಣವಾಗುವ ಗುರಿಯನ್ನು ಭಾರತ ಹೊಂದಿದೆ. ಶುದ್ಧ ವಿದ್ಯುತ್, ದತ್ತಾಂಶ ಸುರಕ್ಷತೆ ಮತ್ತು ತರಬೇತಿ ಪಡೆದ ಕಾರ್ಯಪಡೆಯ ಮೂಲಕ ಈ ಗುರಿ ತಲುಪಲು ಸಾಧ್ಯ ಎಂದರು.

<><><><>

ಅಸ್ಸಾಂನ ದಿಮಾ ಹಸಾವೋ ಜಿಲ್ಲೆಯ ಉಮ್ರಾಂಗ್‌ಸೊದಲ್ಲಿ ಕಲ್ಲಿದ್ದಲು ಗಣಿಯಲ್ಲಿ ಸಿಲುಕಿದ್ದ ಮತ್ತೊಂದು ಮೃತದೇಹವನ್ನು ರಕ್ಷಣಾ ತಂಡ ಇಂದು ಬೆಳಗ್ಗೆ ಹೊರತೆಗೆದಿದೆ. ಹಲವು ಕೇಂದ್ರ ಹಾಗೂ ರಾಜ್ಯ ಸಂಸ್ಥೆಗಳು ನಡೆಸುತ್ತಿರುವ ರಕ್ಷಣಾ ಕಾರ್ಯ ೬ನೇ ದಿನವಾದ ಇಂದೂ ಮುಂದುವರಿದಿದೆ. ಕಳೆದ ಸೋಮವಾರ ಗಣಿಯಲ್ಲಿ ನೀರು ನುಗ್ಗಿದ ಪರಿಣಾಮ ೯ ಜನ ಕಾರ್ಮಿಕರು ಸಿಲುಕಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳನ್ನು ಈಗಾಗಲೇ ಬಂಧಿಸಲಾಗಿದೆ.

<><><><>

ಪಂಜಾಬ್‌ನಲ್ಲಿ ಲೂಧಿಯಾನ ಪಶ್ಚಿಮ ಕ್ಷೇತ್ರದ ಆಮ್ ಆದ್ಮಿ ಪಕ್ಷದ ಶಾಸಕ ಗುರುಪ್ರೀತ್ ಗೋಗಿ ಬಸ್ಸಿ ಅವರು ನಿನ್ನೆ ತಡರಾತ್ರಿ ತಲೆಗೆ ಗುಂಡೇಟು ತಗುಲಿ, ಸಾವನ್ನಪ್ಪಿದ್ದಾರೆ. ಕುಟುಂಬದ ಮೂಲಗಳ ಪ್ರಕಾರ ಗೋಗಿ ಅವರು, ತಮ್ಮ ಬಂದೂಕನ್ನು ಸ್ವಚ್ಛಗೊಳಿಸುತ್ತಿದ್ದ ವೇಳೆ ಆಕಸ್ಮಿಕವಾಗಿ ಗುಂಡುಹಾರಿ, ತಲೆಗೆ ಏಟಾಗಿದೆ. ಅವರನ್ನು ತಕ್ಷಣ ಲೂಧಿಯಾನದ ದಯಾನಂದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ಸೇರಿಸಲಾಯಿತು. ಆದರೆ ಆಸ್ಪತ್ರೆಗೆ ಬರುವಷ್ಟರಲ್ಲೇ ಅವರು ಸಾವನ್ನಪ್ಪಿದ್ದರು ಎಂದು ವೈದ್ಯರು ಘೋಷಿಸಿದ್ದಾರೆ. ಪೊಲೀಸರು ಪ್ರಸ್ತುತ ಪ್ರಕರಣದ ತನಿಖೆಯನ್ನು ಮುಂದುವರಿಸಿದ್ದಾರೆ.

<><><><>

ಬೆಂಗಳೂರಿನಲ್ಲಿಂದು ನಡೆಯುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯದಲ್ಲಿ ಬೆಂಗಳೂರು ಎಫ್‌ಸಿ ಮತ್ತು ಮೊಹಮದನ್ ಎಫ್‌ಸಿ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೫ ಗಂಟೆಗೆ ಆರಂಭವಾಗಲಿದೆ. ಗುವಾಹಾಟಿಯಲ್ಲಿಂದು ನಡೆಯಲಿರುವ ಮತ್ತೊಂದು ಪಂದ್ಯದಲ್ಲಿ ಈಸ್ಟ್ ಬಂಗಾಳ ಮತ್ತು ಮೋಹನ್ ಬಗಾನ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಗುವಾಹಾಟಿಯಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಪಂಜಾಬ್ ಎಫ್‌ಸಿ ಹಾಗೂ ನಾರ್ತ್ ಈಸ್ಟ್ ಯುನೈಟೆಡ್, ತಂಡಗಳು ೧-೧ ಗೋಲುಗಳ ಮೂಲಕ ಡ್ರಾ ಸಾಧಿಸಿವೆ.

<><><><>

ಕೌಲಲಾಂಪುರದಲ್ಲಿ ನಡೆಯುತ್ತಿರುವ ಮಲೇಷ್ಯಾ ಸೂಪರ್ ಥೌಸಂಡ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಸೆಮಿಫೈನಲ್‌ನಲ್ಲಿಂದು ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ದಕ್ಷಿಣ ಕೊರಿಯಾದ ಜೋಡಿಯನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧.೪೦ಕ್ಕೆ ಆರಂಭವಾಗಲಿದೆ. ನಿನ್ನೆ ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ಜೋಡಿ, ಮಲೇಷ್ಯಾ ಜೋಡಿಯನ್ನು ೨೬-೨೪, ೨೧-೧೫ ಸೆಟ್‌ಗಳಿಂದ ಮಣಿಸಿ, ಸೆಮಿಫೈನಲ್ ಪ್ರವೇಶಿಸಿತು.

<><><><>

ರೂರ್ಕೆಲಾದಲ್ಲಿಂದು ನಡೆಯುವ ಹಾಕಿ ಇಂಡಿಯಾ ಲೀಗ್ ಪಂದ್ಯದಲ್ಲಿ ಹೈದರಾಬಾದ್ ತೂಫಾನ್ಸ್ ತಂಡ ಸೂರ್ಮ ಹಾಕಿ ಕ್ಲಬ್ ತಂಡವನ್ನು ಎದುರಿಸಲಿದ್ದು, ಪಂದ್ಯ ಸಂಜೆ ೬ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>